ಸೇರಿದ ಕಟ್ಟಡಗಳ ನಿರ್ವಹಣೆ ಮತ್ತು ಅಭಿವೃದ್ಧಿಗೋಸ್ಕರ ರೂ. 40.00 ಲಕ್ಷಗಳನ್ನು ನಿರ್ದೇಶಕರ ಪಿ.ಡಿ. ಖಾತೆಯಲ್ಲಿ ಇರಿಸಲಾಗಿದೆ.

ಮಲೆಬೆನ್ನೂರು ಸರ್ಕಾರಿ ಆಸ್ಪತ್ರೆಯ ಬಗ್ಗೆ.

434 - ಶ್ರೀ ಹೆಚ್. ಶಿವಪ್ಪ (ಹರಿಹರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹರಿಹರ ತಾಲ್ಲೂಕಿನ ಮಲೆಬೆನ್ನೂರಿನ 50 ಹಾಸಿಗೆಗಳ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಆ) ಇದನ್ನು ಎಷ್ಟು ಅವಧಿಯೊಳಗೆ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಡಾ. ಹೆಚ್.ಸಿ. ಮಹದೇವಪ್ಪ : (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಮಲೆಬೆನ್ನೂರಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಇರುತ್ತದೆ. 50 ಹಾಸಿಗೆಗಳ ಆಸ್ಪತ್ರೆ ಮಂಜೂರಾಗಿರುವುದಿಲ್ಲ. ಆದುದರಿಂದ ಅದನ್ನು ಇನ್ನೂ ಮೇಲ್ದರ್ಜೆಗೇರಿಸುವ ಪ್ರಶ್ನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಶಿಗ್ಗಾಂವ ಹಾಗೂ ಸವಣೂರು ತಾಲ್ಲೂಕು ಪಿ.ಹೆಚ್.ಸಿ.ಗೆ ವೈದ್ಯಾಧಿಕಾರಿಗಳ ನೇಮಕಾತಿ.

435 - ಶ್ರೀ ಮಂಜುನಾಥ .ಸಿ. ಕನ್ನೂರ (ಶಿಗ್ಗಾಂವ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸವಣೂರು ತಾಲ್ಲೂಕು ಎಲೂಗಿ ಪಿ.ಹೆಚ್.ಸಿ.ಯಲ್ಲಿ ಕೆಲಸ ಮಾಡುತ್ತಿರುವ ವೈದ್ಯಾಧಿಕಾರಿಯವರ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿವೆಯೇ ಹಾಗಿದ್ದಲ್ಲಿ ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು?

ಆ) ಶಿಗ್ಗಾಂವ ತಾಲ್ಲೂಕು ಕೇಂದ್ರ ಸ್ಥಳದಲ್ಲಿ ಪಿ.ಹೆಚ್.ಸಿ.ಯನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಪರಿವರ್ತಿಸಿ, ಆದಕ್ಕೆ ಅನುಗುಣವಾಗಿ ವೈದ್ಯಾಧಿಕಾರಿಗಳನ್ನು ನೇಮಕ ಮಾಡಲಾಗಿದೆಯೇ?

ಇ) ಹಾಗಿಲ್ಲದಿದ್ದಲ್ಲಿ, ವೈದ್ಯಾಧಿಕಾರಿಗಳನ್ನು ಎಂದು ಭರ್ತಿ ಮಾಡಲಾಗುವವುದು.

ಈ) ಶಿಗ್ಗಾಂವ ತಾಲ್ಲೂಕು ಬಂಕಾಪುರ ಪಿ.ಹೆಚ್.ಸಿ.ಯನ್ನು ಸಿ.ಹೆಚ್.ಸಿಯನ್ನಾಗಿ ಎಂದು ಪರಿವರ್ತಿಸಲಾಯಿತು. ಈ ಬಗ್ಗೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ಬೇಕಾಗುವ ಸಿಬ್ಬಂದಿಯನ್ನು ಎಂದು ಭರ್ತಿ ಮಾಡಲಾಗುವುದು.

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ. ಈ ಬಗ್ಗೆ ಇಲಾಖಾ ವಿಚಾರಣೆ ನಡೆಸಲಾಗುತ್ತಿದೆ.